## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1871 |
| ಸದಸ್ಯರ ಹೆಸರು | ಶ್ರೀ ಸಿ.ಎನ್ ಮಂಜೇಗೌಡ<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 23-03-2026 |
| ಉತ್ತರಿಸುವ ಸಚಿವರು | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

*****

| ಕ್ರ. ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ರಾಜ್ಯದಲ್ಲಿ ರಾಷ್ಟ್ರೀಯ ಆಯುರ್ವೇದ (National Institute Of Ayurveda) ಸ್ಥಾಪಿಸುವ ಕುರಿತು ಸರ್ಕಾರದ ಮುಂದೆ ಪ್ರಸ್ತಾವನೆ ಸಲ್ಲಿಸಲಾಗಿದೆಯೇ; ಈ ಕೇಂದ್ರ ಸರ್ಕಾರದೊಂದಿಗೆ ನಡೆಸಿರುವ ಪತ್ರ ವ್ಯವಹಾರಗಳ ವಿವರವೇನು; | ರಾಜ್ಯದಲ್ಲಿ ರಾಷ್ಟ್ರೀಯ ಆಯುರ್ವೇದ ಸಂಸ್ಥೆಯನ್ನು (National Institute of Ayurveda) ಸ್ಥಾಪಿಸುವಂತೆ ಕೇಂದ್ರ ಸರ್ಕಾರಕ್ಕೆ ಯಾವುದೇ ಪ್ರಸ್ತಾವನೆಯನ್ನು ಸಲ್ಲಿಸಿರುವುದಿಲ್ಲ. |
| ಆ) | ದಕ್ಷಿಣ ಕನ್ನಡ ಅಥವಾ ಉಡುಪಿ ಜಿಲ್ಲೆಗಳಲ್ಲಿ ಪ್ರಾದೇಶಿಕ ಆಯುರ್ವೇದ ಸಂಶೋಧನಾ ಕೇಂದ್ರವನ್ನು (Regional Ayurveda Research Centre) ಸ್ಥಾಪಿಸುವ ಉದ್ದೇಶ ಸರ್ಕಾರದ ಮುಂದಿದೆಯೇ; ಇದ್ದಲ್ಲಿ ಈ ಯೋಜನೆಗಾಗಿ ಗುರುತಿಸಲಾದ ಸ್ಥಳ ಮತ್ತು ಅನುದಾನದ ವಿವರ ನೀಡುವುದು; | ದಕ್ಷಿಣ ಕನ್ನಡ ಅಥವಾ ಉಡುಪಿ ಜಿಲ್ಲೆಗಳಲ್ಲಿ ಪ್ರಾದೇಶಿಕ ಆಯುರ್ವೇದ ಸಂಶೋಧನಾ ಕೇಂದ್ರವನ್ನು (Regional Ayurveda Research Centre) ಸ್ಥಾಪಿಸುವ ಬಗ್ಗೆ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ. |
| ಇ) | ರಾಜ್ಯದಲ್ಲಿ ಆಯುರ್ವೇದ ಪದ್ಧತಿಯನ್ನು ಉತ್ತೇಜಿಸಲು ಮತ್ತು ಸಂಶೋಧನೆಗೆ ಹೆಚ್ಚಿನ ಒತ್ತು ನೀಡಲು ಸರ್ಕಾರವು ರೂಪಿಸಿರುವ ವಿಶೇಷ ಕ್ರಿಯಾ ಯೋಜನೆಗಳೇನು; | ಕರ್ನಾಟಕದ ಆಯುಷ್ ಇಲಾಖೆಯು ಆಯುರ್ವೇದ ಸಂಶೋಧನೆಗೆ ಒತ್ತು ನೀಡಲು ಮೈಸೂರಿನಲ್ಲಿ ಆಯುರ್ವೇದ ಸಂಶೋಧನ ಕೇಂದ್ರವನ್ನು 2017 ರಲ್ಲಿ ಸ್ಥಾಪಿಸಿದೆ. ಈ ಕೇಂದ್ರವು ರಾಜ್ಯ ಸರ್ಕಾರದ ಆಯುಷ್ ಕಾಲೇಜುಗಳು ಮತ್ತು ಇತರೆ ಖಾಸಗಿ ಕಾಲೇಜುಗಳೊಂದಿಗೆ ಸಮನ್ವಯವನ್ನು ಮಾಡಿ ಆಯುರ್ವೇದ ವಿದ್ಯಾರ್ಥಿಗಳಿಗೆ ಸಂಶೋಧನೆಯನ್ನು ಮಾಡುವ ಕುರಿತು ಸಹಕಾರವನ್ನು ನೀಡುತ್ತದೆ.<br><br>ಪ್ರತಿ ವರ್ಷ ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ ಉಚಿತವಾಗಿ ಸಂಶೋಧನಾತ್ಮಕ ಕಾರ್ಯ ಚಟುವಟಿಕೆಗಳ ಹಲವು ಕಾರ್ಯಾಗಾರಗಳನ್ನು ಹಮ್ಮಿಕೊಳ್ಳುತ್ತಿದ್ದು, ಪ್ರಸಕ್ತ ಸಾಲಿನಲ್ಲಿ ರಾಜ್ಯಾದ್ಯಂತ 8 ಸಂಶೋಧನಾತ್ಮಕ ವಿವಿಧ ಕಾರ್ಯಾಗಾರಗಳನ್ನು ಏರ್ಪಡಿಸಿದ್ದು, ಸದರಿ ಕಾರ್ಯಗಾರದಲ್ಲಿ 1200 ಕ್ಕಿಂತಲೂ ಹೆಚ್ಚು ಸ್ನಾತಕೋತ್ತರ ವಿದ್ಯಾರ್ಥಿಗಳು ಪ್ರಯೋಜನ ಪಡೆದುಕೊಂಡಿರುತ್ತಾರೆ.<br><br>ಪ್ರಸಕ್ತ ಸಾಲಿನಲ್ಲಿ ಎರಡು ಸಂಸ್ಕೃತ ಆಯುರ್ವೇದ ಗ್ರಂಥಗಳನ್ನು ಕನ್ನಡೀಕರಣಗೊಳಿಸುವ ಯೋಜನೆಯನ್ನು ಹಮ್ಮಿಕೊಂಡಿದೆ. |

| | | |
|---|---|---|
| | | ಇದೇ ರೀತಿ ಸಂಶೋಧನ ಕೇಂದ್ರವು ಮೈಸೂರು ಯೋಗ ಹಬ್ ಕೈಪಿಡಿ, ಕಲಿಕಾ ವೈದ್ಯರ ಕೈಪಿಡಿ, ಅಂತಾರಾಷ್ಟ್ರೀಯ ಯೋಗ ದಿನಾಚರಣೆಯ ವಿಶೇಷ ಕಾರ್ಯಕ್ರಮಗಳು ಹಾಗೂ ಸ್ನಾತಕೋತ್ತರ ವೈದ್ಯರ ಸಂಶೋಧನ ಕಲಿಕೆಗೆ ಬೇಕಾದ ಅಗತ್ಯ ಸಹಕಾರವನ್ನು ಒದಗಿಸುವ ಯೋಜನೆಯನ್ನು ಹೊಂದಿದೆ. |
| ಈ) | ಕೇಂದ್ರ ಸರ್ಕಾರದ ಆಯುಷ್ ಮಂತ್ರಾಲಯ (Ministry of Ayush) ವತಿಯಿಂದ ರಾಜ್ಯಕ್ಕೆ ಮಂಜೂರಾಗಿರುವ ಆಯುರ್ವೇದ ಸಂಬಂಧಿತ ಯೋಜನೆಗಳು ಯಾವುವು ಮತ್ತು ಅವುಗಳ ಪ್ರಸ್ತುತ ಸ್ಥಿತಿಗತಿ ಏನು? | ಕೇಂದ್ರ ಸರ್ಕಾರದ ಆಯುಷ್ ಮಂತ್ರಾಲಯವು ರಾಷ್ಟ್ರೀಯ ಅಭಿಯಾನದಡಿಯಲ್ಲಿ ವಿಶೇಷವಾದ ಆಯುರ್ವೇದ ಸಂಬಂಧಿತ ಯೋಜನೆಗಳನ್ನು ಮಂಜೂರು ಮಾಡಿರುವುದಿಲ್ಲ. ಆದಾಗ್ಯೂ ರಾಷ್ಟ್ರೀಯ ಆಯುಷ್ ಅಭಿಯಾನದ ಮಾರ್ಗಸೂಚಿಗಳನ್ವಯ ಆಯುಷ್ ಕ್ಷೇತ್ರದ ಅಭಿವೃದ್ಧಿಗೆ ಈ ಕೆಳಕಂಡ ಕ್ಷೇತ್ರಗಳಿಗೆ ಅನುದಾನ ಒದಗಿಸುತ್ತಿದೆ.<br><br>1. ಆಯುಷ್ಮಾನ್ ಆರೋಗ್ಯ ಮಂದಿರ (ಆಯುಷ್) ಸೇರಿದಂತೆ ಆಯುಷ್ ಆಸ್ಪತ್ರೆಗಳು ಮತ್ತು ಚಿಕಿತ್ಸಾಲಯಗಳನ್ನು ಮತ್ತು ಮೇಲ್ದರ್ಜೆಗೇರಿಸಲಾಗುವುದು ಮತ್ತು ಹೊಸ ಆಯುಷ್ ಆಸ್ಪತ್ರೆಗಳನ್ನು ಸ್ಥಾಪಿಸಲಾಗುವುದು.<br>2. ಸರ್ಕಾರಿ ಆಯುಷ್ ಆಸ್ಪತ್ರೆಗಳಲ್ಲಿ ಸಾರ್ವಜನಿಕರಿಗೆ ಉತ್ತಮ ಆಯುಷ್ ಚಿಕಿತ್ಸೆಯು ದೊರೆಯಲು ಅನುಕೂಲವಾಗಲು ಮೇಲ್ದರ್ಜೆಗೇರಿಸಿದ ಆಯುಷ್ ಆಸ್ಪತ್ರೆಗಳಿಗೆ ತಾತ್ಕಾಲಿಕ ಗುತ್ತಿಗೆ ಆಧಾರದಲ್ಲಿ 02 ತಜ್ಞ ವೈದ್ಯರನ್ನು ಒಳಗೊಂಡಂತೆ ಒಟ್ಟು 08 ವೈದ್ಯಕೀಯ ಮತ್ತು ಅರೆ ವೈದ್ಯಕೀಯ ಸಿಬ್ಬಂದಿಗಳನ್ನು ಒದಗಿಸಲಾಗಿದೆ.<br>3. ಆಯುಷ್ ಇಲಾಖೆಯಡಿಯ ಎಲ್ಲಾ ಆಸ್ಪತ್ರೆಗಳು /ಚಿಕಿತ್ಸಾಲಯಗಳು/ಆಯುಷ್ಮಾನ್ ಆರೋಗ್ಯ ಮಂದಿರ (ಆಯುಷ್)/ವೈದಕೀಯ ಮಹಾವಿದ್ಯಾಲಯಗಳಿಗೆ ಬೇಡಿಕೆಯನುಸಾರ ಆಯುಷ್ ಔಷಧಿಗಳನ್ನು ಪೂರೈಕೆ ಮಾಡಲಾಗುತ್ತಿದೆ.<br>4. ಸಾರ್ವಜನಿಕರಿಗೆ ಆಯುಷ್ ಬಗ್ಗೆ ಅರಿವು ಮೂಡಿಸಲು ಆರೋಗ್ಯ ಮತ್ತು ಕ್ಷೇಮ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ಯೋಗ ಶಿಬಿರಗಳು ಮತ್ತು ಮನೆಮದ್ದುಗಳಂತಹ ಆರೋಗ್ಯ ಜಾಗೃತಿ ಮತ್ತು ಅರಿವು ಹಾಗೂ ರೋಗಗಳನ್ನು ತಡೆಗಟ್ಟುವ ಮತ್ತು ರೋಗ ಬರದಂತೆ ಮುಂಜಾಗ್ರತೆ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ.<br>5. 376 ಆಯುಷ್ ಚಿಕಿತ್ಸಾಲಯಗಳನ್ನು ಆಯುಷ್ಮಾನ್ ಆರೋಗ್ಯ ಮಂದಿರ (ಆಯುಷ್) ಗಳನ್ನಾಗಿ ಮೇಲ್ದರ್ಜೆಗೇರಿಸಿ ಸಾರ್ವಜನಿಕರಿಗೆ ಉಚಿತ ಯೋಗ ತರಗತಿಗಳನ್ನು ಒಳಗೊಂಡಂತೆ ಹಲವು ಕ್ಷೇಮ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿದೆ.<br>6. ಆಯುಷ್ ಶಿಕ್ಷಣ ಸಂಸ್ಥೆಗಳ ಬಲವರ್ಧನೆ ಹಾಗೂ ಶೈಕ್ಷಣಿಕ ಚಟುವಟಿಕೆಗಳನ್ನು ಉತ್ತೇಜಿಸಲು ಅನುದಾನವನ್ನು ಒದಗಿಸಲಾಗುತ್ತಿದೆ. |

ಸಂಖ್ಯೆ: ಆಕುಕ 72 ಪಿಟಿಡಿ 2026

(ದಿನೇಶ್ ಗುಂಡೂರಾವ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು